# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## *ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿರುವ ಹಚ್ಚಿನ್ಸ್ ಪಾರ್ಕ್‌ನಲ್ಲಿ ದಿನಾಂಕ: 05-01-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು*

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

**ಹಾಜರಿದ್ದ ಅಧಿಕಾರಿ/ಸ್ಥಳೀಯರುಗಳು**

1. ಶ್ರೀ ಇಂದಿರಾ ಅರುಣ್, ರಿವೋಬ್ ಅಸೋಸಿಯೇಷನ್,
2. ಶ್ರೀ/ಶ್ರೀಮತಿ ರೋಸಿತಾ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್
3. ಶ್ರೀ ಕಿಶೋರ್.ಇ.ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು,
4. ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

- ವಾರ್ಡ್ ವ್ಯಾಪ್ತಿಯ ನಾರ್ಥ್ ಕಾರ್ನರ್ ನಲ್ಲಿ ಅಳವಡಿಸಿರುವ ಕನ್ನಡ ಬಾವುಟವನ್ನು ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ಕಾರ್ಲ್‌ಸ್ಟನ್ ಸ್ಟ್ರೀಟ್, ಲಾಯ್ಡ್ ರಸ್ತೆ ಮತ್ತು ನಾರ್ಥ್ ರಸ್ತೆಯ ಪಾದಾಚಾರಿ ಮಾರ್ಗದಲ್ಲಿ ಹೂವಿನ ಕುಂಡಗಳನ್ನು ಇಟ್ಟಿದ್ದು, ಇದರಿಂದ ಪಾದಾಚಾರಿ ಮಾರ್ಗದಲ್ಲಿ ಓಡಾಡುವ ನಾಗರೀಕರಿಗೆ ತೊಂದರೆಯಾಗುತ್ತಿರುವುದಾಗಿ ಹಾಗೂ ಇವುಗಳನ್ನು ಕೂಡಲೇ ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಸದರಿ ರಸ್ತೆಗಳಲ್ಲಿ ಪಾದಾಚಾರಿ ಮಾರ್ಗದಲ್ಲಿ ಇಟ್ಟಿರುವ ಹೂ ಕುಂಡಗಳನ್ನು ಕೂಡಲೇ ತೆರವುಗೊಳಿಸಿ, ಪಾದಾಚಾರಿ ಮಾರ್ಗದಲ್ಲಿ ಓಡಾಡುವ ನಾಗರೀಕರಿಗೆ ಅನುಕೂಲ ಮಾಡಿಕೊಡಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ಹೈ ಸ್ಟ್ರೀಟ್‌ನಲ್ಲಿ ಶೌಚಾಲಯ ಹಾಗೂ ತಾತ್ಕಾಲಿಕ ಶೆಡ್ ನಿರ್ಮಾಣ ಮಾಡಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಕೂಡಲೇ ತಾತ್ಕಾಲಿಕ ಶೆಡ್ ಹಾಗೂ ಶೌಚಾಲಯವನ್ನು ಸದರಿ ಸ್ಥಳದಿಂದ ತೆರವುಗೊಳಿಸಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಕೂಡಲೇ ಈ ಕ್ರಮ ವಹಿಸಲು ಕಾಮಗಾರಿ ಇಲಾಖೆಗೆ ತಿಳಿಸಲಾಯಿತು.

- ವಾರ್ಡ್ ವ್ಯಾಪ್ತಿಯ ವೀಲರ್ ರಸ್ತೆ ಹಾಗೂ ಡೇವಿಸ್ ರಸ್ತೆ ಜಂಕ್ಷನ್‌ನಲ್ಲಿರುವ ವಾಣಿಜ್ಯ ಮಳಿಗೆಗಳಿಗೆ ಪಾಲಿಕೆಯ ವತಿಯಿಂದ ನೀಡಿರುವ ವಾಣಿಜ್ಯ ಚಟುವಟಿಕೆ ನಡೆಸಲು ಪರವಾನಿಗೆ ಪತ್ರವನ್ನು ಪರಿಶೀಲಿಸಿ, ಪರವಾನಿಗೆ ಇಲ್ಲದ ಅಂಗಡಿ ಮಾಲೀಕರ ವಿರುದ್ಧ ಸೂಕ್ತ ಕ್ರಮ ವಹಿಸಲು ಸಭೆಯಲ್ಲಿ



Scanned with CamScanner

ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಆರೋಗ್ಯ ಇಲಾಖೆಗೆ ಅಧಿಕಾರಿ/ನೌಕರರು ಸೂಕ್ತ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಲಾಯಿತು.

- ವಾರ್ಡ್ ವ್ಯಾಪ್ತಿಯ ನಾರ್ಥ್ ರಸ್ತೆ, ಲಾಯ್ಡ್ ರಸ್ತೆ ಮತ್ತು ಹಚ್ಚಿನ್ಸ್ ರಸ್ತೆ ಹಾಗೂ ಕೆಲವು ಮುಖ್ಯರಸ್ತೆಗಳಲ್ಲಿ ಇತ್ತೀಚೆಗೆ ವಾಹನ ಸಂಚಾರ ದಟ್ಟಣೆ ಹೆಚ್ಚಾಗಿದ್ದು, ಈ ಬಗ್ಗೆ ಪುಲಿಕೇಶಿನಗರ / ಬಾಣಸವಾಡಿ ಸಂಚಾರ ಪೊಲೀಸ್ ಠಾಣೆ ರವರ ಗಮನಕ್ಕೆ ತಂದು ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯಲ್ಲಿ ಬಾಕಿ ಇರುವ ಆಸ್ತಿ ತೆರಿಗೆಯನ್ನು ವಸೂಲಾತಿ ಮಾಡಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ಮಾಹೆಗೆ ಸಂಗ್ರಹವಾಗುತ್ತಿರುವ ಆಸ್ತಿ ತೆರಿಗೆಯ ಶೇಕಡವಾರನ್ನು ಹೆಚ್ಚಿಸಿ, ಆಸ್ತಿ ತೆರಿಗೆ ಬಾಕಿ ಇರುವ ಎಲ್ಲಾ ಮಾಲೀಕರಿಗೆ ನೋಟೀಸ್ ನೀಡಿ, ಸೂಕ್ತ ದಂಡದೊಂದಿಗೆ ವಸೂಲಾತಿ ಮಾಡಲು ಕ್ರಮ ವಹಿಸಲು ಸಭೆಗೆ ತಿಳಿಸಲಾಯಿತು.

- ವಾರ್ಡ್ ವ್ಯಾಪ್ತಿಯಲ್ಲಿ ಏರ್‌ಟೆಲ್ ವತಿಯಿಂದ ಅಳವಡಿಸಿರುವ ಕಂಬವನ್ನು ತೆರವುಗೊಳಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಪ್ರಸ್ತಾಪಿತ ಏರ್‌ಟೆಲ್ ಕಂಬವನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ಹೈ ಸ್ಟ್ರೀಟ್ ಹಾಗೂ ವೀಲರ್ ರಸ್ತೆ ಎಕ್ಸ್‌ಟೆನ್ಷನ್ ಕಾರ್ನರ್‌ನಲ್ಲಿ ಕುಡಿಯುವ ನೀರಿನ ಪೈಪ್‌ಲೈನ್ ಹೊಡೆದು ಹೋಗಿದ್ದು, ಇದರಿಂದ ನೀರು ರಸ್ತೆಗೆ ಹರಿದು ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸದರಿ ಪ್ರಸ್ತಾಪಿತ ಪ್ರದೇಶಗಳಲ್ಲಿ ಹೊಡೆದು ಹೋಗಿರುವ ಪೈಪ್‌ಲೈನ್ ದುರಸ್ತಿಯನ್ನು ಅತೀ ತುರ್ತಾಗಿ ಕೈಗೊಳ್ಳಲು ಸಂಬಂಧಪಟ್ಟ ಇಲಾಖೆಗೆ ತಿಳಿಸಲು ಸೂಚಿಸಲಾಯಿತು.

- ವಾರ್ಡ್ ವ್ಯಾಪ್ತಿಯಲ್ಲಿರುವ ಮಕ್ಕಳ ಉದ್ಯಾನವನದಲ್ಲಿ ಅವಶ್ಯಕವಿರುವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡು ಮಕ್ಕಳಿಗೆ, ವಯೋವೃದ್ಧರಿಗೆ ಹಾಗೂ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ತೋಟಗಾರಿಕಾ ಇಲಾಖೆಯೊಂದಿಗೆ ಚರ್ಚಿಸಿ, ಸದರಿ ಉದ್ಯಾನವನಕ್ಕೆ ಅವಶ್ಯಕವಿರುವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸೂಚಿಸಲಾಯಿತು.

- ವಾರ್ಡ್ ವ್ಯಾಪ್ತಿಯ ನಾರ್ಥ್ ರಸ್ತೆ, ಮಸೀದಿ ಹತ್ತಿರ ಇರುವ ಬೋರ್‌ವೆಲ್ ಕಾರ್ಯನಿರ್ವಹಿಸದೇ ಇರುವುದರಿಂದ ಅದನ್ನು ತೆರವುಗೊಳಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಗೆ ತಿಳಿಸಿದರು.

- ವಾರ್ಡ್ ವ್ಯಾಪ್ತಿಯ ನಾಗಯ್ಯಪಾಳ್ಯ ಮತ್ತು ಇತರೆ ವಾರ್ಡ್ ಪ್ರದೇಶದಲ್ಲಿ ಬಿದ್ದಿರುವ ಡೆಬ್ರೀಸ್ ಅನ್ನು ತೆರವುಗೊಳಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ಮುಖ್ಯರಸ್ತೆ ಹಾಗೂ ಅಡ್ಡರಸ್ತೆಗಳಲ್ಲಿ ಬಿದ್ದಿರುವ ಡೆಬ್ರೀಸ್ ಅನ್ನು ಕೂಡಲೇ ತೆರವುಗೊಳಿಸಲು ಕಾಮಗಾರಿ ಇಲಾಖೆಗೆ ತಿಳಿಸಲಾಯಿತು.

- ವಾರ್ಡ್ ವ್ಯಾಪ್ತಿಯ ನಾಗಯ್ಯಪಾಳ್ಯ ಮುಖ್ಯರಸ್ತೆಯ ಇಕ್ಕೆಲಗಳಲ್ಲಿ ಹಾಗೂ ನಾರ್ಥ್ ರಸ್ತೆಯ ತಿರುವಿನಲ್ಲಿರುವ ಚಿಲ್ಲೀಸ್ ರೆಸ್ಟೋರೆಂಟ್ ಮುಂಭಾಗದಲ್ಲಿ ವಾಹನಗಳನ್ನು ನಿಲುಗಡೆ ಮಾಡುತ್ತಿದ್ದು,



Scanned with CamScanner

ಇದರಿಂದ ರಸ್ತೆಯಲ್ಲಿ ಸಂಚರಿಸುವ ವಾಹನ ಸವಾರರು ಹಾಗೂ ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿದ್ದು, ವಾಹನ ದಟ್ಟಣೆ ಹೆಚ್ಚಾಗುತ್ತಿರುವುದರಿಂದ ಅಂತಹ ಸ್ಥಳಗಳನ್ನು ಗುರುತಿಸಿ, ನೋ ಪಾರ್ಕಿಂಗ್ ಬೋರ್ಡ್ ಅಳವಡಿಸಿ, ವಾಹನ ನಿಲುಗಡೆಯನ್ನು ತಡೆಗಟ್ಟಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಸಂಚಾರಿ ಪೊಲೀಸ್ ಠಾಣೆಯ ಗಮನಕ್ಕೆ ತಂದು ವಾಹನ ನಿಲುಗಡೆಯನ್ನು ತಡೆಗಟ್ಟಲು ಕ್ರಮ ವಹಿಸಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

- ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯಲ್ಲಿ ಕಳೆದ 10 ದಿನಗಳಿಂದ ಸುಮಾರು 34 ಕೋವಿಡ್ ಪ್ರಕರಣಗಳು ದಾಖಲಾಗಿದ್ದು, ಕೋವಿಡ್ ಸೋಂಕು ಹೆಚ್ಚಾಗುತ್ತಿದ್ದು, ಜನಸಾಮಾನ್ಯರು ದಿನನಿತ್ಯ ದೇವಸ್ಥಾನ, ಮಸೀದಿ ಹಾಗೂ ಚರ್ಚ್‌ಗಳಿಗೆ ತೆರಳದಂತೆ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಹಾಗೂ ಆಗಿಂದ್ದಾಗ್ಗೆ ಸ್ಯಾನಿಟೈಸರ್ ಬಳಸಲು ಜನ ಜಾಗೃತಿ ಮೂಡಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಜನಸಾಮಾನ್ಯರು ಕಡ್ಡಾಯವಾಗಿ ಮಾಸ್ಕ್ ಧರಿಸಲು ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವಂತೆ ಜನಜಾಗೃತಿ ಮೂಡಿಸಲು ಹಾಗೂ ಒಂದು ವೇಳೆ ಮಾಸ್ಕ್ ಧರಿಸದೇ ಇರುವವರಿಗ್ಧೆ ಸೂಕ್ತ ದಂಡ ವಿಧಿಸಿ, ಜನಾಜಾಗೃತಿ ಮೂಡಿಸಲು ಮಾರ್ಷಲ್‌ಗಳಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

- ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ಮಾಹೆಯಲ್ಲಿ ನಡೆಯುವ ವಾರ್ಡ್ ಕಮಿಟಿ ಸಭೆಗಳಿಗೆ ಪೊಲೀಸ್ ಸಂಚಾರಿ ಮತ್ತು ಕಾನೂನು ಸುವ್ಯವಸ್ಥೆ ಅಧಿಕಾರಿಗಳು ಗೈರು ಹಾಜರಿಯಾಗುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಕುಂದು ಕೊರತೆಗಳನ್ನು ಚರ್ಚಿಸಲು ಕಷ್ಟಸಾಧ್ಯವಾಗಿರುತ್ತದೆ ಮತ್ತು ಈ ಬಗ್ಗೆ ಸಭೆಯಲ್ಲಿ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದ್ದು, ಮುಂದಿನ ಸಭೆಗೆ ಕಡ್ಡಾಯವಾಗಿ ಹಾಜರಾಗಲು ಸಭೆಯು ಸರ್ವಾನುಮತದಿಂದ ತೀರ್ಮಾನಿಸಿತು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು / ಕಾರ್ಯದರ್ಶಿಯವರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

05/01/2021

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

**<u>ಪ್ರತಿಯನ್ನು</u>**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.



Scanned with CamScanner